## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 558 |
| ಸದಸ್ಯರ ಹೆಸರು | : | ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 19.07.2024. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್ ಕ್ಷೇತ್ರಗಳ ಸಂಖ್ಯೆ ಎಷ್ಟು; ಚುನಾಯಿತ ಪ್ರತಿನಿಧಿಗಳಿಲ್ಲದಿರುವುದರಿಂದ ಸಾಮಾನ್ಯ ನಾಗರೀಕರ ಕೆಲಸ ಕಾರ್ಯಗಳಿಗೆ ಅಡಚಣೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಯಾವ ರೀತಿ ಪರ್ಯಾಯ ವ್ಯವಸ್ಥೆ ಮಾಡಿದೆ; (ವಿವರ ನೀಡುವುದು) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್ ಕ್ಷೇತ್ರಗಳ ವಿವರ ಈ ಕೆಳಕಂಡಂತಿದೆ.<br><br>**ಜಿಲ್ಲೆ** / **ಜಿಲ್ಲಾ ಪಂಚಾಯತಿ ಕ್ಷೇತ್ರಗಳ ಸಂಖ್ಯೆ** / **ತಾಲ್ಲೂಕು ಪಂಚಾಯತಿಗಳ ಕ್ಷೇತ್ರಗಳ ಸಂಖ್ಯೆ**<br>ಕಲಬುರಗಿ / 48 / 175<br>ಯಾದಗಿರಿ / 28 / 94<br><br>ಕಲಬುರಗಿ ಮತ್ತು ಯಾದಗಿರಿ ಜಿಲ್ಲಾ ಪಂಚಾಯತಿ ಅವಧಿ ಪೂರ್ಣಗೊಂಡ ನಂತರ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 321 ರನ್ವಯ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳನ್ನು ಜಿಲ್ಲಾ ಪಂಚಾಯತಿಗಳಿಗೆ ಆಡಳಿತಾಧಿಕಾರಿಗಳಾಗಿ ನೇಮಿಸಿದೆ.<br><br>ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ತಾಲ್ಲೂಕು ಪಂಚಾಯತಿ ಅವಧಿ ಪೂರ್ಣಗೊಂಡ ನಂತರ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 321 ರನ್ವಯ ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿಗಳು ಅಥವಾ ಉಪ ಕಾರ್ಯದರ್ಶಿಗಳ ದರ್ಜೆ ಕಡಿಮೆ ಇಲ್ಲದ ಅಧಿಕಾರಿಗಳನ್ನು ತಾಲ್ಲೂಕು ಪಂಚಾಯತಿಗಳಿಗೆ ಆಡಳಿತಾಧಿಕಾರಿಗಳಾಗಿ ನೇಮಿಸಿದೆ.<br><br>ಮೇಲ್ಕಂಡಂತೆ ಚುನಾಯಿತ ಪ್ರತಿನಿಧಿಗಳ ಅವಧಿ ಪೂರ್ಣಗೊಂಡ ನಂತರ ಆಡಳಿತಾಧಿಕಾರಿಗಳನ್ನು ನೇಮಿಸಲು ಕ್ರಮ ವಹಿಸಿರುವುದರಿಂದ ಸಾಮಾನ್ಯ ನಾಗರೀಕರ ಕೆಲಸ ಕಾರ್ಯಗಳಿಗೆ ಅಡಚಣೆಯಾಗಿರುವುದಿಲ್ಲ. |
| (ಆ) | ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್‌ಗಳಿಗೆ ಚುನಾವಣೆ ನಡೆಸಲು ಸರ್ಕಾರಕ್ಕಿರುವ ಅಡೆ-ತಡೆಗಳೇನು; ಇದನ್ನು ನಿವಾರಣೆ ಮಾಡಲು ಸರ್ಕಾರಕ್ಕೆ ಸಾಧ್ಯವಿಲ್ಲವೇ; ಕಾನೂನಾತ್ಮಕ ಪ್ರಕ್ರಿಯೆ ಯಾವ ಹಂತದಲ್ಲಿದೆ; ಶೀಘ್ರ ಚುನಾವಣೆ ನಡೆಸಲು ಸರ್ಕಾರ ಕೈಗೊಂಡ | ಕಳೆದ ನಾಲ್ಕು ವರ್ಷದ ಅವಧಿಯಲ್ಲಿ, ರಾಜ್ಯದಲ್ಲಿ ಹೊಸದಾಗಿ 63 ತಾಲ್ಲೂಕುಗಳು ರಚನೆಯಾಗಿರುತ್ತವೆ ಹಾಗೂ ಹೊಸದಾಗಿ ಒಂದು ಜಿಲ್ಲಾ ಪಂಚಾಯಿತಿ ರಚನೆಯಾಗಿರುತ್ತದೆ ಹಾಗೂ 71 ಗ್ರಾಮ ಪಂಚಾಯಿತಿಗಳು ನಗರ ಸ್ಥಳೀಯ ಸಂಸ್ಥೆಗಳಾಗಿ ಪರಿವರ್ತನೆಗೊಂಡಿರುವ ಕಾರಣ ಕೆಲವೊಂದು ತಾಲ್ಲೂಕುಗಳ ಹಾಗೂ ಜಿಲ್ಲೆಗಳ ಮತ್ತು ಗ್ರಾಮ ಪಂಚಾಯಿತಿಗಳ ಭೂ ಪ್ರದೇಶ ವ್ಯಾಪ್ತಿ ಮತ್ತು ಜನ ಸಂಖ್ಯೆಯಲ್ಲಿ ಹೆಚ್ಚಿನ ಬದಲಾವಣೆಯಾಗಿರುತ್ತದೆ. ಈ ಎಲ್ಲಾ ಕಾರಣಗಳಿಂದ |

| | | |
|---|---|---|
| | ಕ್ರಮಗಳೇನು? (ವಿವರ ನೀಡುವುದು) | ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿಗಳ ಚುನಾವಣಾ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಬದಲಾವಣೆಗಳಾಗಿರುತ್ತವೆ.<br><br>ಈ ಎಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ರಾಜ್ಯದ ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯಿತಿಗಳ ಚುನಾವಣಾ ಕ್ಷೇತ್ರಗಳನ್ನು ವಿಂಗಡಿಸಿ ಅವುಗಳ ಸೀಮಾ/ಗಡಿಯನ್ನು ನಿರ್ಣಯಿಸಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 308-ಇ ರಂತೆ ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವನ್ನು ರಚಿಸಲಾಗಿದ್ದು, ಆಯೋಗದ, ಶಿಫಾರಸ್ಸಿನಂತೆ ರಾಜ್ಯ ಸರ್ಕಾರ ಚುನಾವಣಾ ಕ್ಷೇತ್ರಗಳನ್ನು ನಿಯಮಾನುಸಾರ ಪುನರ್ ರಚಿಸಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದೆ. ಪ್ರಸ್ತುತ ಈ ಎಲ್ಲಾ ಕ್ಷೇತ್ರಗಳಿಗೆ ನಿಯಮಾನುಸಾರ ಮೀಸಲಾತಿಯನ್ನು ನಿಗದಿಗೊಳಿಸಿ ಕರಡು ಅಧಿಸೂಚನೆಯನ್ನು ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸಲು ಸರ್ಕಾರದ ಹಂತದಲ್ಲಿ ಕ್ರಮ ವಹಿಸಲಾಗುತ್ತಿದೆ. ಈ ಕಾರಣಗಳಿಂದ ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯಿತಿ ಕ್ಷೇತ್ರಗಳಿಗೆ ಚುನಾವಣೆಯನ್ನು ನಡೆಸಲು ಸಾಧ್ಯವಾಗಿರುವುದಿಲ್ಲ.<br><br>ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯಿತಿಗಳ ಚುನಾವಣೆಯನ್ನು ಆದಷ್ಟು ಬೇಗ ನಡೆಸಲು ಸರ್ಕಾರ ನಿರ್ಧರಿಸಿರುತ್ತದೆ. ಚುನಾವಣಾ ಕ್ಷೇತ್ರಗಳ ಮೀಸಲಾತಿಯ ಕರಡು ಅಧಿಸೂಚನೆಯನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಅಧಿಸೂಚಿಸಲು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ. ಈ ಎಲ್ಲಾ ಪ್ರಕ್ರಿಯೆಗಳು ಅಂತಿಮಗೊಂಡ ನಂತರ ಚುನಾವಣೆಯನ್ನು ನಡೆಸುವಂತೆ ರಾಜ್ಯ ಚುನಾವಣೆ ಆಯೋಗಕ್ಕೆ ಸೂಕ್ತ ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು. |

ಸಂಖ್ಯೆ: ಗ್ರಾಅಪ 315 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.